# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಹಾಗೂ ಶ್ರೀ ಡಿ.ಟಿ.ಶ್ರೀನಿವಾಸ್, ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

*********

**ಪ್ರಶ್ನೆ:-**

ರಾಜ್ಯದಲ್ಲಿ ಹಲವಾರು ಭಾಷೆಗಳ ಮಾತನಾಡುವ ಅಲ್ಪಸಂಖ್ಯಾತರು ಶಾಲೆಗಳನ್ನು ಶಿಕ್ಷಣ ಇಲಾಖೆಯಿಂದ ಅನುಮತಿ ಪಡೆದು ನಡೆಸುತ್ತಿದ್ದಾರೆ. ಇದರಲ್ಲಿ ಹಲವಾರು ಶಿಕ್ಷಣ ಸಂಸ್ಥೆಗಳಿಗೆ ಭಾಷೆಗಳಿಗುಣವಾಗಿ ಸ್ಥಾನಮಾನವನ್ನು ನೀಡಲಾಗಿದೆ. ಆದರೆ ರಾಜ್ಯದಲ್ಲಿ ಭಾಷಾ ಅಲ್ಪಸಂಖ್ಯಾತರ ಹಾಗು ಮತೀಯ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಸಂವಿಧಾನ ಪರಿಚ್ಛೇದ 30/1 ರ ಪ್ರಕಾರ ಅಲ್ಪಸಂಖ್ಯಾತ ಸ್ಥಾನಮಾನ, ಸೌಲಭ್ಯಗಳನ್ನು ಪಡೆಯಲು ಅವಕಾಶವಿದ್ದರು ಸ್ಥಾನಮಾನವನ್ನು ನೀಡದೆ ವಿನಾ ಕಾರಣ ಸರ್ಕಾರವು ವಿಳಂಬ ಧೋರಣೆ ಅನುಸರಿಸುತ್ತಿದೆ. ಇದರಿಂದ ಭಾಷಾ ಅಲ್ಪಸಂಖ್ಯಾತರ ಹಾಗು ಮತೀಯ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ತುಂಬಾ ತೊಂದರೆಯಾಗಿದ್ದು ಕೂಡಲೇ ಸಂವಿಧಾನದಲ್ಲಿ ನೀಡಿರುವ ಅವಕಾಶದಂತೆ ಭಾಷಾ ಅಲ್ಪಸಂಖ್ಯಾತ ಹಾಗು ಮತೀಯ ಅಲ್ಪಸಂಖ್ಯಾತರ ಸ್ಥಾನಮಾನವನ್ನು ನೀಡಬೇಕೆಂಬ ವಿಷಯವನ್ನು ನಿಯಮ 330ರಲ್ಲಿ ಮಾನ್ಯ ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

**ಉತ್ತರ:-**

ರಾಜ್ಯದಲ್ಲಿ ಅಲ್ಪಸಂಖ್ಯಾತರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತ ಶೈಕ್ಷಣಿಕ ಸಂಸ್ಥೆಗಳನ್ನಾಗಿ ಘೋಷಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗಳು ನಿಯಮ/ಸರ್ಕಾರಿ ಆದೇಶದ ಮೂಲಕ ಈ ಕೆಳಕಂಡಂತೆ ಷರತ್ತುಗಳನ್ನು ವಿಧಿಸಿ ಅನುಷ್ಠಾನಗೊಳಿಸುತ್ತಿವೆ.

| ಇಲಾಖೆಗಳು | ಮಾನದಂಡಗಳು |
|---|---|
| 1. **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.**<br>ಸರ್ಕಾರದ ಆದೇಶ ಸಂಖ್ಯೆ: ಇಡಿ 27 ಮಾಹಿತಿ 2012 (ಭಾಗ-1), ದಿ:18.06.2014. | 1. ಶಾಲೆಯ ಆಡಳಿತ ಮಂಡಳಿಯ ಸದಸ್ಯರು ಕಾರ್ಯಕಾರಿ ಸಮಿತಿಯಲ್ಲಿದ್ದು, ಆಯಾಯ ಭಾಷಾ/ಮತೀಯ ಅಲ್ಪಸಂಖ್ಯಾತ ಸದಸ್ಯರ ಸಂಖ್ಯೆ ಕನಿಷ್ಠ ಮೂರನೇ ಎರಡರಷ್ಟು ಇರಬೇಕು.<br>2. ಅಲ್ಪಸಂಖ್ಯಾತ ಸಂಸ್ಥೆ ಶಾಲೆಗಳೆಂದು ಘೋಷಿಸಲು ಆ ಶಾಲೆಗಳು ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇ.25 ರಷ್ಟು ಆಯಾ ಭಾಷಾ/ಆಯಾ ಮತೀಯ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರಬೇಕು. |
| 2. **ಉನ್ನತ ಶಿಕ್ಷಣ ಇಲಾಖೆ.**<br>ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ಕಾಲೇಜು ಶಿಕ್ಷಣ) ನಿಯಮಗಳು 2014. ದಿ:30.07.2014) (ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 156 ಯುಪಿಸಿ 2013, | 1. At least two-third of the trustees and members of the managing committee of the society, of the collegiate education institute shall belong to the minority community [Rule-4(5)]<br>2. Out of the total intake not less than fifty percent enrolled in the said collegiate education institution shall |

| | |
|---|---|
| 3. **ತಾಂತ್ರಿಕ ಶಿಕ್ಷಣ ಇಲಾಖೆ.**<br>ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ತಾಂತ್ರಿಕ ಶಿಕ್ಷಣ) ನಿಯಮಗಳು 2014.<br>(ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 131 ಟಿಪಿಇ 2014 ದಿನಾಂಕ: 20.08.2014) | 1. At least two-third of the trustees or members of the managing committee of the society, of the technical educational institution shall belong to the minority. [Rule-4(5)]<br>2. Not less than Fifty percent of the children enrolled in the said institution shall belong to said Minority Community to which applicant the institution belongs to, out of which at least Seventy Five percent of student shall be from Karnataka. [Rule-4(6)] |
| 4. **ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.**<br>ಕರ್ನಾಟಕ ಕೈಗಾರಿಕ ತರಬೇತಿ ಸಂಸ್ಥೆ (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ತಾಂತ್ರಿಕ ಶಿಕ್ಷಣ) ನಿಯಮಗಳು 2023.<br>(ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್‌ಡಿಇಎಲ್ 79 ಐಟಿಐ 2021, ದಿನಾಂಕ: 18.05.2023.) | 1. At least two-third of the trustees or members of the managing committee of the society, of the Industrial Training Institution shall belong to the Minority. [Rule-4(5)]<br>2. Not less than Fifty percent of the children enrolled in the said institution shall belong to said Minority Community to which applicant the institution belongs to, out of which at least Seventy Five percent of student shall be from Karnataka. [Rule-4(6)] |

ರಾಜ್ಯದಲ್ಲಿನ ಒಟ್ಟು ಅಲ್ಪಸಂಖ್ಯಾತರ ಜನಸಂಖ್ಯೆಯಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಸಮುದಾಯಗಳ ಜನಸಂಖ್ಯೆಯ ಪ್ರಮಾಣವು ತುಂಬಾ ಕಡಿಮೆ ಇರುವುದರಿಂದ ಅಲ್ಪಸಂಖ್ಯಾತರ ಸಮುದಾಯದವರು ನಡೆಸುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಗಳೆಂದು ಘೋಷಿಸಲು ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಲ್ಲಿ ನಿಗದಿಪಡಿಸಿರುವಷ್ಟು ಶೇಕಡವಾರು ವಿದ್ಯಾರ್ಥಿಗಳು ಲಭ್ಯವಾಗುವುದು ಕಷ್ಟಕರವಾಗುತ್ತಿತ್ತು.

ಆದ್ದರಿಂದ,ರಾಜ್ಯದಲ್ಲಿ ಮತೀಯ ಅಲ್ಪಸಂಖ್ಯಾತ ಸಮುದಾಯ (Religious Minority) ದವರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಮತೀಯ ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಯೆಂದು ಘೋಷಿಸಲು ಇರುವ ನಿಯಮ/ಆದೇಶಗಳಲ್ಲಿ, ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಗಳ ರಾಷ್ಟ್ರೀಯ ಆಯೋಗದ ಮಾರ್ಗಸೂಚಿಗಳಿಗೊಳಪಟ್ಟು ಆ ಶೈಕ್ಷಣಿಕ ಸಂಸ್ಥೆಗಳ ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇಕಡ ಇಂತಿಷ್ಟು ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರತಕ್ಕದ್ದು ಎಂಬ ಷರತ್ತನ್ನು ಸಚಿವ ಸಂಪುಟದ ಅನುಮೋದನೆ ಪಡೆದು ಸರ್ಕಾರದ ಆದೇಶ ಸಂಖ್ಯೆ:MWD-LMR/2/2024 (Part-5) ದಿನಾಂಕ:16.03.2024 ಮತ್ತು ತಿದ್ದುಪಡಿ ದಿನಾಂಕ:18.03.2024ರಲ್ಲಿ ರದ್ದುಪಡಿಸಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದನ್ವಯ ಈ ಬಗ್ಗೆ ಸಂಬಂಧಪಟ್ಟ ನಿಯಮ/ಆದೇಶಗಳಿಗೆ ಸೂಕ್ತ ತಿದ್ದುಪಡಿ ಮಾಡುವಂತೆ ಆಯಾ ಆಡಳಿತ ಇಲಾಖೆಗಳಿಗೆ ಅಗತ್ಯ ಕ್ರಮವಹಿಸುವಂತೆ ಸದರಿ ಆದೇಶದಲ್ಲಿ ಸೂಚಿಸಲಾಗಿದೆ.

ಮುಂದುವರೆದು, ರಾಜ್ಯದಲ್ಲಿ ಮತೀಯ ಅಲ್ಪಸಂಖ್ಯಾತ ಸಮುದಾಯ (Religious Minority) ದವರಿಗೆ ಹೊರಡಿಸಲಾಗಿರುವ ಸದರಿ ಆದೇಶವನ್ನು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಸಂಬಂಧಿಸಿದ ಭಾಷಾ ಅಲ್ಪಸಂಖ್ಯಾತ (linguistic Minority) ಸಮುದಾಯದ ಶೈಕ್ಷಣಿಕ ಸಂಸ್ಥೆಗಳಿಗೂ ಸಹ ಅನ್ವಯಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಆದೇಶ ಹೊರಡಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಕಡತ ಸಂಖ್ಯೆ: MWD-MDS/228/2024

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.